## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 112
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
ಉತ್ತರಿಸಬೇಕಾದ ದಿನಾಂಕ : 01-02-2021
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ"(KREIS-ಕ್ರೈಸ್) ಅಧೀನದ ವಸತಿ ಶಾಲೆಗಳ ಸಹ ಶಿಕ್ಷಕರುಗಳಿಗೆ ಶಿಕ್ಷಣ ಇಲಾಖೆಗಳ ಸಹ ಶಿಕ್ಷಕರುಗಳ ಮಾದರಿಯಂತೆ, ಮಾನ್ಯ ಉಚ್ಛ ನ್ಯಾಯಾಲಯ ಧಾರವಾಡ ಪೀಠದ ಆದೇಶಾನುಸಾರ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಶಿಕ್ಷಕರುಗಳಿಗೆ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳು-2011 ಹಾಗೂ ಮೀಸಲಾತಿ ಅನುಸಾರ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡಲು ಕ್ರಮವಹಿಸಲಾಗಿರುತ್ತದೆ. |
| ಆ) | ಸದರಿ ವಸತಿ ಶಾಲೆಗಳಲ್ಲಿರುವ ಪ್ರಾಂಶುಪಾಲರ ಖಾಲಿಯಿರುವ ಹುದ್ದೆಗಳಿಗೆ ಸಹ ಶಿಕ್ಷಕರುಗಳನ್ನು ಕಳೆದ 10 ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಡ್ತಿ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; | ಹೌದು.<br>2011 ರ ವೃಂದ ಮತ್ತು ನೇಮಕಾತಿ ನಿಯಮಾವಳಿ ಪ್ರಕಾರ, ಶಿಕ್ಷಕರುಗಳಿಗೆ 50:50 ರಂತೆ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ಅವಕಾಶ ಕಲ್ಪಿಸಲಾಗಿರುತ್ತದೆ.<br>ಆದರೆ, ಶಿಕ್ಷಕರುಗಳು ಮಾನ್ಯ ಉಚ್ಛ ನ್ಯಾಯಾಲಯ, ಧಾರವಾಡ ಪೀಠ ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 107705-709/ 2018 & 108366-369/2018(EDN) ರಂತೆ ದಾವೆ ಹೂಡಿ, ಸಹ ಶಿಕ್ಷಕರುಗಳಿಗೆ ಜಾರಿಯಲ್ಲಿರುವ ಶೇ.50:50 ರ ಅನುಪಾತದಲ್ಲಿ ಪ್ರಾಂಶುಪಾಲರ ಹುದ್ದೆಗೆ ಭರ್ತಿ ಮಾಡುವುದರ ಬದಲಾಗಿ ಶೇ.75:25 (ಬಡ್ತಿ:ನೇರ ನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಕೋರಿರುತ್ತಾರೆ. ಸದರಿ ಪ್ರಕರಣವನ್ನು ಆಲಿಸಿದ ಮಾನ್ಯ ಉಚ್ಛ ನ್ಯಾಯಾಲಯವು ದಿ: 25.01.2019ರಲ್ಲಿ ಆದೇಶ ನೀಡಿ, ಸಹ ಶಿಕ್ಷಕರುಗಳ ಹುದ್ದೆಯಿಂದ ಮುಂಬಡ್ತಿ ಮತ್ತು ನೇರ ನೇಮಕಾತಿಯನ್ನು ಶೇ.75:25 (ಬಡ್ತಿ:ನೇರ ನೇಮಕಾತಿ) ಅನುಪಾತದಲ್ಲಿ ಪುರಸ್ಕರಿಸಲು ಆದೇಶಿಸಿದೆ.<br>ಸರ್ಕಾರದ ಆದೇಶ ಸಂಖ್ಯೆ: ಸಕಇ 19 ಮೊದೇಶಾ 2019, ದಿನಾಂಕ: 22.07.2019 ರಲ್ಲಿ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ 75:25 (ಬಡ್ತಿ:ನೇರ ನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ಸಮಗ್ರ ತಿದ್ದುಪಡಿಯಲ್ಲಿ ಸೇರಿಸಿ ಮಂಜೂರಾತಿ ನೀಡಿ ಆದೇಶಿಸಲಾಗಿದೆ. |

| | | |
|---|---|---|
| | | ಅದರಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿ ಪ್ರಕಟಿಸಿ, ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಲು ಆಂತರಿಕ ಸಮಿತಿಯನ್ನು ರಚಿಸಲಾಗಿರುತ್ತದೆ.<br>ಸದರಿ ಆಂತರಿಕ ಸಮಿತಿ ಆಕ್ಷೇಪಣೆಗಳ ಬಗ್ಗೆ ಪರಿಶೀಲಿಸಿ, ಸಮಿತಿಯ ಶಿಫಾರಸ್ಸಿನಂತೆ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಅಂತಿಮ ಜೇಷ್ಠತಾ ಪಟ್ಟಿಯ ಅನುಸಾರ ಮುಂಬಡ್ತಿ ನೀಡಲು ಅರ್ಹತಾ ಪಟ್ಟಿಯನ್ನು ತಯಾರಿಸಲು ಸಂಬಂದಿಸಿದ ವಸತಿ ಶಾಲೆಯಿಂದ ದಾಖಲಾತಿಗಳನ್ನು ಪಡೆದು ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯಲ್ಲಿ ಸಹ ಶಿಕ್ಷಕರುಗಳನ್ನು ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು? | ದಿನಾಂಕ 27.01.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಚರ್ಚಿಸಲಾಗಿ ಹೈದರಾಬಾದ್-ಕರ್ನಾಟಕ ಮೀಸಲಾತಿ ಹಾಗೂ ಮೀಸಲಾತಿ ಕುರಿತಂತೆ ಹೈದರಾಬಾದ್–ಕರ್ನಾಟಕ ವಿಶೇಷ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಕ್ರಮವಾಗಿ ಸ್ಪಷ್ಟ ಅಭಿಪ್ರಾಯ ಪಡೆದು ಶಿಕ್ಷಕರಿಗೆ ಮುಂಬಡ್ತಿ ನೀಡಲು ಕ್ರಮವಹಿಸಲು ತೀರ್ಮಾನಿಸಲಾಗಿದ್ದು, ಅದರಂತೆ ಸಹ ಶಿಕ್ಷಕರಿಗೆ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಸಕಇ 14 ಮೊದೇಶಾ 2021**

(ಬಿ. ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.